ಮಿಸ್ ನಂ. 05/2017 ಪಿ.ಡಬ್ಲ್ಯೂ 1

ಸಾಕ್ಷಿಯ ಹೆಸರುಃ ಸ್ವಾಮಿಗೌಡ

ದಿನಾಂಕ 04-06-2022 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

ಸಾಕ್ಷಿಯು ತನ್ನ ಮುಖ್ಯ ವಿಚಾರಣೆಯ ಪ್ರತಿಜ್ಞಾಪತ್ರ ಸಲ್ಲಿಸಿದ್ದು ಅದರಲ್ಲಿ ಬರೆದ ವಿಷಯವೆಲ್ಲಾ ಸತ್ಯವಾಗಿರುತ್ತವೆ ಮತ್ತು ಅದರಲ್ಲಿರುವ ಸಹಿ ನನ್ನದೆಂದು ಪ್ರಮಾಣಿಸಿ ಹೇಳಿರುತ್ತಾರೆ.

<u>ಮುಂದುವರೆದ ಮುಖ್ಯ ವಿಚಾರಣೆಃ</u> ಅರ್ಜಿದಾರರ ಪರ ಶ್ರೀ ಎಂ ಆರ್ ಆರ್ ವಕೀಲರಿಂದ,

ಯಾವುದೇ ದಾಖಲೆ ಹಾಜರುಪಡಿಸಿರುವುದಿಲ್ಲ. ಮಧ್ಯಂತರ ಅರ್ಜಿ ನಂ. 1 ನ್ನು ಪುರಸ್ಕರಿಸಬೇಕಾಗಿ ಕೋರಿಕೊಳ್ಳುತ್ತೇನೆ.

<u>ಪಾಟೀ ಸವಾಲುಃ</u> ಎದುರುದಾರರ ಪರ ಶ್ರೀ ಎಜಿಪಿ ವಕೀಲರಿಂದ

ನಾನು ಓದು ಬರಹ ಕಲಿತಿಲ್ಲ. ನಾವು ಒಟ್ಟು ಐದು ಜನ ಮಕ್ಕಳು. ನಮ್ಮ ಕುಟುಂಬದ ವಂಶವೃಕ್ಷವನ್ನು ಹಾಜರುಪಡಿಸಿರುತ್ತೇನೆ. ನಾವು ಐದು ಜನ ಸೇರಿ ಈ ಅರ್ಜಿಯನ್ನು ಸಲ್ಲಿಸಿರುತ್ತೇವೆ. ನನ್ನ ತಂದೆ ಕರೀಗೌಡರು ಕೇಸು ಹಾಕಿದ ವಿಚಾರ ನನಗೆ ಗೊತ್ತಿಲ್ಲ. ನಾವು ಮತ್ತು ನನ್ನ ತಂದೆ ಒಟ್ಟು ಕುಟುಂಬದಲ್ಲೇ ವಾಸವಿದ್ದೆವು. ನಾವೆಲ್ಲರೂ ಒಟ್ಟು ಕುಟುಂಬದಲ್ಲಿ ವಾಸವಾಗಿದ್ದರಿಂದ ಕುಟುಂಬದ ವ್ಯವಹಾರದ ವಿಚಾರ ಹಾಗೂ ಕೇಸು ದಾಖಲು ಮಾಡಿದ ವಿಚಾರ ನನಗೆ ಗೊತ್ತಿತ್ತು ಎಂದರೆ ಸರಿಯಲ್ಲ. ನಮ್ಮ ತಂದೆ ತೀರಿಕೊಂಡ ನಂತರ ಈ ಕೇಸಿನ ವಿಚಾರ ನಮ್ಮ ವಕೀಲರು ನಮ್ಮ ಊರಿಗೆ ಬಂದು ತಿಳಿಸಿರುತ್ತಾರೆ. ನನ್ನ ತಂದೆ ಆರೋಗ್ಯ ಸ್ಥಿತಿ ಚೆನ್ನಾಗಿದ್ದಿಲ್ಲವೆಂಬ ಬಗ್ಗೆ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

2) ನನ್ನ ತಂದೆ ಆರು ವರ್ಷಗಳ ಹಿಂದೆ ತೀರಿಕೊಂಡಿರುತ್ತಾರೆ. ನನ್ನ ತಂದೆ ತೀರಿಕೊಂಡ ನಂತರ ಕುಟುಂಬದಲ್ಲಿ ಕಷ್ಟ ಇದ್ದುದ್ದರಿಂದ ಅರ್ಜಿಯನ್ನು ಸಲ್ಲಿಸಿರುವುದಿಲ್ಲ. ನಮ್ಮ ತಂದೆ ನ್ಯಾಯಾಲಯಕ್ಕೆ ಸರಿಯಾಗಿ ಹಾಜರಾಗದೇ ಇರುವುದರಿಂದ ಹಾಗೂ ದಾಖಲೆಗಳನ್ನು ಹಾಜರುಪಡಿಸದೇ ಇರುವುದರಿಂದ ನಮ್ಮ ಕೇಸು ವಜಾ ಆಗಿತ್ತು ಎಂದರೆ ಸಾಕ್ಷಿ ನನ್ನ ತಂದೆ ನ್ಯಾಯಾಲಯಕ್ಕೆ ಹಾಜರಾಗುತ್ತಿದ್ದರು ಎನ್ನುತ್ತಾರೆ. ನಾವೆಲ್ಲರೂ ಒಟ್ಟು ಕುಟುಂಬದಲ್ಲಿ ಇರುವುದರಿಂದ ನ್ಯಾಯಾಲಯದ ಪ್ರಕರಣದ ಬಗ್ಗೆ ನನಗೆ ಗೊತ್ತಿದ್ದರೂ ಸಹ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ಬರೆದ ವಿಚಾರ ನನಗೆ ಗೊತ್ತು. ಕೇಸನ್ನು ಏಕೆ ವಿಳಂಬವಾಗಿ ಸಲ್ಲಿಸಿರುತ್ತೀರಿ ಎಂಬ ಬಗ್ಗೆ ದಾಖಲೆಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿ. ನನ್ನ ತಂದೆ ನ್ಯಾಯಾಲಯಕ್ಕೆ ಹಾಜರಾಗದೇ ಇರುವುದರಿಂದ

ವಜಾ ಆಗಿರುವ ಆದೇಶ ಸೂಕ್ತವಾದ ಆದೇಶ ಎಂದರೆ ಸರಿಯಲ್ಲ. ಕಾಲ ಪರಿಮಿತಿ ಒಳಗೆ ನಾನು ಅರ್ಜಿ ಸಲ್ಲಿಸದೆ ದುರುದ್ದೇಶಪೂರ್ವಕವಾಗಿ ಈ ಅರ್ಜಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಕೆ.ಆರ್.ನಗರ.